ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲಿಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

ಸಂಖ್ಯೆ: DPA/TP/LAO/09/2020-21/346 ದಿನಾಂಕ: 20 JUN 2023

## ಅಂತಿಮ ವಸತಿ ವಿನ್ಯಾಸ ಅನುಮೋದನಾ ಪತ್ರ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2) ರಡಿಯಲ್ಲಿ)

**ವಿಷಯ:** ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ–00ಗುಂಟೆ ಅಥವಾ 8093.60ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ತಾತ್ಕಾಲಿಕವಾಗಿ ಅನುಮೋದಿಸಲಾಗಿರುವ ವಸತಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ ವಸತಿ ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಲು ಕೋರಿರುವ ಬಗ್ಗೆ.

**ಉಲ್ಲೇಖ:**

1) ಶ್ರೀ ದಿನೇಶ್ ಬೋಹ್ರಾ, ನಿರ್ದೇಶಕರು, ಮೆ॥ ಫತ್ತೆ ಗ್ರಾನೈಟ್ ಲಿಮಿಟೆಡ್ ರವರ ಅರ್ಜಿ ದಿನಾಂಕ: 10/12/2020.
2) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಬಿಡಿಎಸ್/ಎಎಲ್ಎನ್ ಎಸ್.ಆರ್ (ದೊ)/25/89–90 ದಿ: 26/09/1989 [ಸ.ನಂ. 61].
3) ದಿನಾಂಕ: 23/02/2021 ರಂದು ನಡೆದ ಪ್ರಾಧಿಕಾರದ 10ನೇ ಸಭೆಯ ವಿಷಯ ಸಂ. 10.29 ರ ನಡಾವಳಿ.
4) ಈ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದ ಸಮ ಸಂಖ್ಯೆ ಪತ್ರ ದಿನಾಂಕ: 03/03/2021.
5) ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 937 ರಿಂದ 942 ರ ದಿನಾಂಕ: 24/03/2021 ರಂತೆ ಒಟ್ಟು ಶುಲ್ಕ ರೂ. 6,89,500/– (ಆರು ಲಕ್ಷದ ಎಂಬತ್ತೊಂಬತ್ತು ಸಾವಿರದ ಐದು ನೂರು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಿರುತ್ತಾರೆ.
6) ಪ್ರಸ್ತಾಪಿತ ವಸತಿ ವಿನ್ಯಾಸದಲ್ಲಿ ಉದ್ಯಾನವನ ಮತ್ತು ರಸ್ತೆ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಮುಖ್ಯಾಧಿಕಾರಿಗಳು, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗೆ ಮತ್ತು ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸುವ ಸಂಬಂಧ ದೃಢೀಕರಿಸಿರುವ ಪತ್ರ ದಿನಾಂಕ: 14/07/2022.
7) ಪ್ರಸ್ತಾಪಿತ ವಸತಿ ವಿನ್ಯಾಸದಲ್ಲಿ ಕಾಯ್ದಿರಿಸಲಾಗಿರುವ ಉದ್ಯಾನವನ ಮತ್ತು ರಸ್ತೆ ಪ್ರದೇಶಗಳನ್ನು ಉಪನೋಂದಣಾಧಿಕಾರಿಗಳು, ದೊಡ್ಡಬಳ್ಳಾಪುರ ರವರ 1ನೇ ಪುಸ್ತಕದ ದಸ್ತಾವೇಜು ನಂ. DBP-1-08680-2022-23 ಆಗಿ ಸಿ.ಡಿ. ನಂಬರ್ DBPD 1402 ನೇ ದ್ದರಲ್ಲಿ ದಿನಾಂಕ: 13–09–2022 ರಂದು ನೋಂದಾಯಿಸಿರುವ ಪರಿತ್ಯಾಜನಾ ಪತ್ರದ ಮೂಲಕ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗೆ ಹಾಗೂ ನಾಗರೀಕ ಸೌಲಭ್ಯದ ನಿವೇಶನವನ್ನು ಉಪನೋಂದಣಾಧಿಕಾರಿಗಳು, ದೊಡ್ಡಬಳ್ಳಾಪುರ ರವರ 1ನೇ ಪುಸ್ತಕದ ದಸ್ತಾವೇಜು ನಂ. DBP-1-08682-2022-23 ಆಗಿ ಸಿ.ಡಿ. ನಂಬರ್ DBPD 1402 ನೇ ದ್ದರಲ್ಲಿ ದಿನಾಂಕ: 13–09–2022 ರಂದು ನೋಂದಾಯಿಸಿರುವ ಪರಿತ್ಯಾಜನಾ ಪತ್ರದ ಮೂಲಕ ಈ ಪ್ರಾಧಿಕಾರಕ್ಕೆ ಹಸ್ತಾಂತರಿಸಿರುವ ಬಗ್ಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಪ್ರತಿಗಳನ್ನು ಸಲ್ಲಿಸಿರುವ ದಿನಾಂಕ: 01/10/2022.
8) ಈ ಪ್ರಾಧಿಕಾರದ ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನಾ ಪತ್ರ ಸಂಖ್ಯೆ: DPA/TP/LAO/09/2020-21/819 ದಿನಾಂಕ: 14/10/2022.
9) ಅರ್ಜಿದಾರರ ಮನವಿ ದಿನಾಂಕ: 10/11/2022.
10) ದಿನಾಂಕ: 30/11/2022 ರಂದು ನಡೆದ ಪ್ರಾಧಿಕಾರದ 21ನೇ ಸಭೆಯ ವಿಷಯ ಸಂ. 21.26 ರ ನಡಾವಳಿ.
11) ಈ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದ ಸಮ ಸಂಖ್ಯೆ ಪತ್ರ ದಿನಾಂಕ: 15/12/2022.
12) ಹಿರಿಯ ತೋಟಗಾರಿಕಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ದೊಡ್ಡಬಳ್ಳಾಪುರ ತಾಲ್ಲೂಕು ರವರ ಪತ್ರ ಸಂಖ್ಯೆ:ಹಿಸತೋನಿ/ಜಿ.ಪಂ/ದೊಬಪುರ/ತಾಸ/2022–23 ದಿ:21/01/2023.

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.3, ಲೋಕೋಪಯೋಗಿ ಇಲಾಖೆ ಉಪವಿಭಾಗ, ದೊಡ್ಡಬಳ್ಳಾಪುರ ರವರ ಪತ್ರ ಸಂಖ್ಯೆ: ಸಕಾಅ/ಲೋ.ಉ.ವಿ/ದೊಬಪುರ/ಮು.ಪ್ರ.ಪತ್ರ/ 2022–23/650 ದಿನಾಂಕ: 21/01/2023.

14) ಈ ಪ್ರಾಧಿಕಾರಕ್ಕೆ ಪಾವತಿಸಲಾದ ಶುಲ್ಕ ರೂ.10,000/– ರಶೀದಿ ಸಂಖ್ಯೆ:1641, ದಿ:14/02/2023.

15) ಮುಖ್ಯಾಧಿಕಾರಿಗಳು, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯ್ತಿ ರವರ ಪತ್ರ ಸಂಖ್ಯೆ: ಬಾ.ಪ.ಪಂ/ತಾಂ.ಶಾ/ ಸಿ.ಆರ್/66/2022–23 ದಿ:17/02/2023.

16) ಸಹಾಯಕ ಕಾರ್ಯಪಾಲಕ ಅಭಿಯಂತರರು (Ele), C, O&M Urban Subdivision, BESCOM, Doddaballapura ರವರ ಪತ್ರ ಸಂಖ್ಯೆ: AEE/AET/DBP-USD/2022-23/7251 ದಿ:27/03/2023.

17) ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ–ವಿಭಾಗ, ದೊಡ್ಡಬಳ್ಳಾಪುರ ತಾಲ್ಲೂಕು ರವರ ಪತ್ರ ಸಂಖ್ಯೆ: ಸಕಾಅ/ಗ್ರಾ.ಕು.ನೀ&ನೈಇ/ ದೊ.ಪುರ/ಮು.ಪ್ರ.ಪತ್ರ/503/2022–23 ದಿನಾಂಕ: 17/04/2023.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿ ಅರ್ಜಿದಾರರಾದ ಶ್ರೀ ದಿನೇಶ್ ಬೋಹ್ರಾ, ನಿರ್ದೇಶಕರು, ಮೆ॥ ಫತ್ಥೆ ಗ್ರಾನೈಟ್ ಲಿಮಿಟೆಡ್ ಇವರು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ–00ಗುಂಟೆ ಅಥವಾ 8093.60ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಶ್ನಿತ ಜಮೀನುಗಳು ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/95/ಬಿಎಂಆರ್/2016 ದಿನಾಂಕ: 30–11–2017 ರನ್ವಯ ದೊಡ್ಡಬಳ್ಳಾಪುರ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಸೇರಲ್ಪಟ್ಟಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27–01–2009 ಮತ್ತು ತಿದ್ದುಪಡಿ ಆದೇಶ ದಿನಾಂಕ:29–01–2009 ರನ್ವಯ ಅನುಮೋದಿಸಲ್ಪಟ್ಟ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಮಹಾಯೋಜನೆಯಲ್ಲಿ ಭಾಗಶಃ ಉದ್ಯಾನವನ ಮತ್ತು ಭಾಗಶಃ ಕೈಗಾರಿಕಾ' ಭೂ ಉಪಯೋಗ ವಲಯದಲ್ಲಿದ್ದು, ಉಲ್ಲೇಖ (2) ರ ಅಧಿಕೃತ ಜ್ಞಾಪನ ಪತ್ರದನ್ವಯ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಂದ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 156 ಬಿಎಂಆರ್ 2018 ದಿನಾಂಕ: 29–09–2018 ರನ್ವಯ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಯಲ್ಲಿನ ಅಭಿವೃದ್ಧಿಗಳಿಗೆ ಅನುಮತಿ ನೀಡಲು ಅಳವಡಿಸಿಕೊಳ್ಳಲಾಗಿರುವ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದಿಂದ ಅನುಮೋದನೆಯಾಗಿರುವ ವಲಯ ನಿಯಮಾವಳಿಯಲ್ಲಿನ 15.3.15 General Rules ನ 15.3.15.1 Conversions ನ 'a' ರಲ್ಲಿ Conversions prior to the final approval of Master Plan are to be honoured irrespective of the land use proposed in the Master Plan except in cases of road alignment, natural drains and water bodies" ಎಂದು ವ್ಯಾಖ್ಯಾನಿಸಲಾಗಿದ್ದು, ಅದರಂತೆ, ಪ್ರಸ್ತಾಪಿತ ಜಮೀನಿನ ಭೂ ಪರಿವರ್ತನೆ ಅಧಿಕೃತ ಜ್ಞಾಪನ ಪತ್ರದಂತೆ ವಸತಿ ಉದ್ದೇಶವನ್ನು ಪರಿಗಣಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 26 ಶಾಸನ 2021, ಬೆಂಗಳೂರು ದಿನಾಂಕ: 05/07/2021 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2) (ಎ) ರಂತೆ ಸದರಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (3) ರಲ್ಲಿನ ದಿನಾಂಕ: 23/02/2021 ರಂದು ನಡೆದ ಪ್ರಾಧಿಕಾರದ 10ನೇ ಸಭೆಯ ವಿಷಯ ಸಂ. 10.29 ರಲ್ಲಿ ಮಂಡಿಸಲಾಗಿದ್ದು, ಸಭೆಯ ನಡಾವಳಿಯಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ–00ಗುಂಟೆ ಅಥವಾ 8093.60ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2)(ಎ)ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲಿಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಉಲ್ಲೇಖ (4) ರಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸಲು ತಿಳಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ (5) ರಂತೆ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪಾವತಿಸಿರುತ್ತಾರೆ. ಪ್ರಸ್ತಾಪಿತ ವಸತಿ ವಿನ್ಯಾಸದಲ್ಲಿ ಬರುವ ರಸ್ತೆ ಮತ್ತು ಉದ್ಯಾನವನ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗೆ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಲು ಅರ್ಜಿದಾರರಿಗೆ ಉಲ್ಲೇಖ (6) ರ ಈ ಕಛೇರಿಯ ಪತ್ರದಲ್ಲಿ ಸೂಚಿಸಿರುವ ಹಿನ್ನೆಲೆಯಲ್ಲಿ ಅರ್ಜಿದಾರರು ಉಲ್ಲೇಖ (7) ರ ಮನವಿ ಪತ್ರದೊಂದಿಗೆ ಪ್ರಸ್ತಾಪಿತ ವಸತಿ ವಿನ್ಯಾಸದಲ್ಲಿ ಕಾಯ್ದಿರಿಸಲಾಗಿರುವ ಉದ್ಯಾನವನ ಮತ್ತು ರಸ್ತೆ ಪ್ರದೇಶಗಳನ್ನು ಉಪನೋಂದಣಾಧಿಕಾರಿಗಳು, ದೊಡ್ಡಬಳ್ಳಾಪುರ ರವರ 1ನೇ ಪುಸ್ತಕದ ದಸ್ತಾವೇಜು ನಂ. DBP-1-08680-2022-23 ಆಗಿ ಸಿ.ಡಿ. ನಂಬರ್ DBPD 1402 ನೇ ದ್ದರಲ್ಲಿ ದಿನಾಂಕ: 13-09-2022 ರಂದು ನೋಂದಾಯಿಸಿರುವ ಪರಿತ್ಯಾಜನಾ ಪತ್ರದ ಮೂಲಕ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗೆ ಹಾಗೂ ಉಪನೋಂದಣಾಧಿಕಾರಿಗಳು, ದೊಡ್ಡಬಳ್ಳಾಪುರ ರವರ 1ನೇ ಪುಸ್ತಕದ ದಸ್ತಾವೇಜು ನಂ. DBP-1-08682-2022-23 ಆಗಿ ಸಿ.ಡಿ. ನಂಬರ್ DBPD 1402 ನೇ ದ್ದರಲ್ಲಿ ರಂದು ನೋಂದಾಯಿಸಿರುವ ಪರಿತ್ಯಾಜನಾ ಪತ್ರದ ಮೂಲಕ ಈ ಪ್ರಾಧಿಕಾರಕ್ಕೆ ಹಸ್ತಾಂತರಿಸಿರುವ ಬಗ್ಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಪ್ರತಿಗಳನ್ನು ಪ್ರತಿಗಳನ್ನು ಸಲ್ಲಿಸಿರುತ್ತಾರೆ. ಆದುದರಿಂದ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2) (ಎ) ರ ಅಡಿಯಲ್ಲಿ ವಸತಿ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಉಲ್ಲೇಖ (8) ರಂತೆ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿತ್ತು.

ಅರ್ಜಿದಾರರು ಉಲ್ಲೇಖ (9) ರ ದಿನಾಂಕ: 09/01/2023 ರ ಮನವಿ ಅರ್ಜಿಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ-00ಗುಂಟೆ ಅಥವಾ 8093.60ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ, ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಉಲ್ಲೇಖ (10) ರಲ್ಲಿನ ದಿನಾಂಕ: 30/11/2022 ರಂದು ನಡೆದ ಪ್ರಾಧಿಕಾರದ 21ನೇ ಸಭೆಯ ವಿಷಯ ಸಂ. 21.26 ರ ನಡಾವಳಿಯಲ್ಲಿ ಪ್ರಸ್ತಾಪಿತ ವಸತಿ ಬಡಾವಣೆಯಲ್ಲಿನ ಅಭಿವೃದ್ಧಿ ಕಾರ್ಯಗಳು ಪೂರ್ಣಗೊಂಡಿರುವ ಬಗ್ಗೆ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯ್ತಿ, ತೋಟಗಾರಿಕೆ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆ ರವರಿಂದ ಪಡೆದಿರುವ ದೃಢೀಕರಣ ಪತ್ರಗಳನ್ನು ಹಾಗೂ ಬೆಸ್ಕಾಂ ರವರಿಂದ ಪಡೆದಿರುವ ಸರ್ವಿಸ್ ಸರ್ಟಿಫಿಕೇಟ್ ಹಾಗೂ ಅಭಿವೃದ್ಧಿ ಕಾಮಗಾರಿಗಳ ಛಾಯಾಚಿತ್ರಗಳನ್ನು ಸಲ್ಲಿಸಿದ ನಂತರ ನಿಯಮಾನುಸಾರ ಕ್ರಮವಹಿಸಿ ಈ ಕೆಳಕಂಡ ಷರತ್ತುಗಳೊಂದಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ ವಿಸ್ತೀರ್ಣದ ಜಮೀನಿನ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ ವಿನ್ಯಾಸದಲ್ಲಿನ ನಿವೇಶನಗಳನ್ನು ಬಿಡುಗಡೆ ಮಾಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸ - ಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ, ಉಲ್ಲೇಖ (11) ರ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸಿ, ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ (12) ರಲ್ಲಿ ವಸತಿ ವಿನ್ಯಾಸದ ಉದ್ಯಾನವನ ಪ್ರದೇಶವನ್ನು ಅಭಿವೃದ್ಧಿಪಡಿಸಿರುವ ಬಗ್ಗೆ ಹಿರಿಯ ತೋಟಗಾರಿಕಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ದೊಡ್ಡಬಳ್ಳಾಪುರ ತಾಲ್ಲೂಕು ರವರಿಂದ ಪಡೆದಿರುವ ದೃಢೀಕರಣ ಪತ್ರ, ಉಲ್ಲೇಖ (13) ರಲ್ಲಿ ವಸತಿ ಬಡಾವಣೆಯಲ್ಲಿನ ರಸ್ತೆ, ಚರಂಡಿ ಮತ್ತು ಮೋರಿಗಳನ್ನು ಅಭಿವೃದ್ಧಿಪಡಿಸಿರುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.3, ಲೋಕೋಪಯೋಗಿ ಇಲಾಖೆ ಉಪವಿಭಾಗ, ದೊಡ್ಡಬಳ್ಳಾಪುರ ರವರಿಂದ ಪಡೆದ ದೃಢೀಕರಣ ಪತ್ರವನ್ನು ಸಲ್ಲಿಸಿರುತ್ತಾರೆ. ಅರ್ಜಿದಾರರು ಉಲ್ಲೇಖ (14) ರಂತೆ ನಿಗಧಿತ ಶುಲ್ಕಗಳನ್ನು ಪಾವತಿಸಿರುತ್ತಾರೆ. ಉಲ್ಲೇಖ (15) ರಲ್ಲಿ ವಸತಿ ವಿನ್ಯಾಸದ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಗೊಳಿಸಿರುವ ಬಗ್ಗೆ ಮುಖ್ಯಾಧಿಕಾರಿಗಳು, ಬಾಶೆಟ್ಟಹಳ್ಳಿ ಪಟ್ಟಣ ಪಂಚಾಯಿತಿರವರಿಂದ ಪಡೆದ ದೃಢೀಕರಣ ಪತ್ರವನ್ನು ಸಲ್ಲಿಸಿರುತ್ತಾರೆ. ಉಲ್ಲೇಖ (16) ರಲ್ಲಿ ವಸತಿ ವಿನ್ಯಾಸದ ವಿದ್ಯುದ್ದೀಕರಣ ಕಾಮಗಾರಿಗಳ

ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (Ele), C, O&M Urban Subdivision, BESCOM, Doddaballapura ರವರಿಂದ ಪಡೆದ ಸೇವಾ ಪ್ರಮಾಣ ಪತ್ರ ಹಾಗೂ ಉಲ್ಲೇಖ (17) ರಲ್ಲಿ ವಸತಿ ಬಡಾವಣೆಯಲ್ಲಿನ ನಿವೇಶನಗಳಿಗೆ ನೀರು ಸರಬರಾಜು ಪೈಪ್‌ಲೈನುಗಳು, ಎಸ್‌ಟಿಪಿ ಗಳನ್ನು ಅಭಿವೃದ್ಧಿಪಡಿಸಿರುವ ಬಗ್ಗೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಉಪವಿಭಾಗ, ದೊಡ್ಡಬಳ್ಳಾಪುರ ತಾಲ್ಲೂಕು ರವರಿಂದ ಪಡೆದ ದೃಢೀಕರಣ ಪತ್ರವನ್ನು ಹಾಗೂ ವಸತಿ ವಿನ್ಯಾಸ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 61 ರಲ್ಲಿನ 2ಎಕರೆ–00ಗುಂಟೆ ಅಥವಾ 8093.60ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2)(ಬಿ)ರ ಅಡಿಯಲ್ಲಿ ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ಅಂತಿಮ ಅನುಮೋದನೆ ನೀಡಿ, ವಿನ್ಯಾಸದಲ್ಲಿನ ಎಲ್ಲಾ ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಲಾಗಿದೆ.

## ಷರತ್ತುಗಳು

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಒಹೆಚ್.109.ಕೆಹೆಚ್‌ಬಿ.2017 ದಿನಾಂಕ: 10–07–2017ರಂತೆ RERAದಲ್ಲಿ ನೋಂದಾಯಿಸಿಕೊಂಡು ನಿಯಮಾನುಸಾರ ಅಗತ್ಯ ಕ್ರಮವಹಿಸುವ ಷರತ್ತಿಗೆ ಒಳಪಟ್ಟಿದೆ.
2. ಅಂತಿಮ ಅನುಮೋದನೆಯಾದ ವಿನ್ಯಾಸದಲ್ಲಿ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಯಾವುದೇ ಬದಲಾವಣೆಗಳನ್ನು ಮಾಡತಕ್ಕದಲ್ಲ.
3. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು.
4. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನಗಳನ್ನು ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ಪ್ರದೇಶಗಳನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
5. ಸದರಿ ವಿನ್ಯಾಸದಲ್ಲಿ ಘನತ್ಯಾಜ್ಯ ನಿರ್ವಹಣೆಗಾಗಿ ಪ್ರತ್ಯೇಕ ಸ್ಥಳ ಕಾಯ್ದಿರಿಸತಕ್ಕದ್ದು.
6. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ–ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
7. ಸದರಿ ಅನುಮೋದನೆಯನ್ನು ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ತಾಂತ್ರಿಕವಾಗಿ ಪರಿಶೀಲಿಸಿ ಅನುಮೋದನೆ ನೀಡಿರುವುದರಿಂದ ಸದರಿ ಅನುಮೋದನೆಯನ್ನು ಮಾಲೀಕತ್ವದ ದಾಖಲೆಯೆಂದು ದೃಢೀಕರಿಸಿಕೊಳ್ಳಲು ಉಪಯೋಗಿಸತಕ್ಕದ್ದಲ್ಲ.
8. ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
9. ಈ ವಿನ್ಯಾಸದಲ್ಲಿ ಬರುವ ನಿವೇಶನಗಳ ಮಾರಾಟ ಸಂಬಂಧ ನೀಡುವ ವಿಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
10. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವಿಗೆ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ: 21/04/2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling tracks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲಿಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

11. ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.
12. ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.
13. ಪ್ರಸ್ತಾವಿತ ಬಡಾವಣೆಯಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಬಡಾವಣೆಯ ಮಾಲೀಕರು ಒದಗಿಸತಕ್ಕದ್ದು.
14. ಸದರಿ ವಿನ್ಯಾಸದ ಸುತ್ತಲೂ ಕಾಂಪೌಂಡ್ ನಿರ್ಮಿಸಿ ಗೇಟ್ ಅನ್ನು ಅಳವಡಿಸಿ ಗೇಟೆಡ್ ಕಮ್ಯೂನಿಟಿ ಎಂಬ ಹೆಸರಿನಲ್ಲಿ ನಿವೇಶನಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ.
15. ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.
16. ಬಡಾವಣೆ ನಕ್ಷೆಗೆ ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ಅನುಮೋದನೆ ನೀಡಿರುವುದರಿಂದ ಮುಂದಿನ ದಿನಗಳಲ್ಲಿ ಸದರಿ ಜಮೀನುಗಳ ಮಾಲೀಕತ್ವಕ್ಕೆ ಸಂಬಂಧಿಸಿದಂತೆ ತಂಟೆ ತಕರಾರು ಅಥವಾ ಸಿವಿಲ್ ವ್ಯಾಜ್ಯಗಳು ಉದ್ಭವವಾದ್ದಲ್ಲಿ ಬಡಾವಣೆ ಮಾಲೀಕರೇ ಹೊಣೆಗಾರರಾಗಿರುತ್ತಾರೆ.
17. ಈ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಈ ವಸತಿ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು ಹಾಗೂ ಅನುಮೋದನೆ ನೀಡಲಾದ ನಿರ್ದಿಷ್ಟ ಬಳಕೆಗೆ ಮಾತ್ರ ಉಪಯೋಗಿಸತಕ್ಕದ್ದು.
18. ಈ ವಿನ್ಯಾಸದಲ್ಲಿನ ಉದ್ಯಾನವನ ಜಾಗಗಳು ಮತ್ತು ರಸ್ತೆಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ ಆದ್ದರಿಂದ ಈ ಸಾರ್ವಜನಿಕ ಸ್ವತ್ತುಗಳನ್ನು ಸಾರ್ವಜನಿಕರಿಗೆ ಮುಕ್ತವಾಗಿಡತಕ್ಕದ್ದು.
19. ಈ ಅನುಮೋದನೆಯು ಜಮೀನುಗಳ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸುವ ಸಲುವಾಗಿ ಉಪಯೋಗಿಸಲು ಬರುವುದಿಲ್ಲ ಹಾಗೂ ಈ ಜಮೀನುಗಳಿಗೆ ಸಂಬಂಧಿಸಿದ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
20. ಪ್ರಸ್ತಾವಿತ ಜಮೀನುಗಳು ಯಾವುದೇ ಭೂಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಬ್ದಾರಿಯಾಗಿರುವುದಿಲ್ಲ.
21. ಒಂದು ವೇಳೆ ಸರ್ಕಾರವು ಪೂರ್ವಾನ್ವಯವಾಗುವಂತೆ ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಅರ್ಜಿದಾರರು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.
22. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ, ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಈ ಅನುಮೋದನೆಯು ಯಾವ ಪೂರ್ವ ಸೂಚನೆಯೂ ಇಲ್ಲದೇ ತಂತಾನೆ ರದ್ದಾಗುತ್ತದೆ.
23. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of Water (Prevention & Control of Pollution) Act, 1974 ರ ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮ ಕೈಗೊಳ್ಳಲು ಸೂಚಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.
    - i. ರಾಜ ಕಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು.
    - ii. ರಾಜಕಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು.
    - iii. ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ರಾಜ ಕಾಲುವೆಗಳ ಅಳತೆಗಳನ್ನು ಅತಿಕ್ರಮ/ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯಲು ಬೇಕಾದ ಕ್ರಮವಹಿಸುವುದು.
    - iv. ರಾಜ ಕಾಲುವೆಗಳು Silt ಆಗದಂತೆ ಹಾಗೂ ತೆರೆದ ಸ್ಥಿತಿಯಲ್ಲಿ ಸ್ವಚ್ಛವಾಗಿರುವಂತೆ ಕ್ರಮವಹಿಸುವುದು.

24. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೇ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

20.06.23

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ
ದೊಡ್ಡಬಳ್ಳಾಪುರ

20.06.23 20.06.23

**ಇವರಿಗೆ,**

**ಶ್ರೀ ದಿನೇಶ್ ಬೋಹ್ರಾ, ನಿರ್ದೇಶಕರು,**
**ಮೆ॥ ಫತ್ಥೆ ಗ್ರಾನೈಟ್ ಲಿಮಿಟೆಡ್**
ನಂ.606, 'ಬಿ' ವಿಂಗ್, 6ನೇ ಮಹಡಿ,
ಮಿತಲ್ ಟವರ್, ಎಂ.ಜಿ. ರಸ್ತೆ,